# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1087 (1383) |
| ಮಾನ್ಯ ಸದಸ್ಯರ ಹೆಸರು | ಶ್ರೀ ಗೋವಿಂದ ರಾಜು<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 30/12/2022 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕಳೆದ 2 ವರ್ಷಗಳಿಂದ ಕಾರ್ಮಿಕರ ಮಕ್ಕಳ ಶಿಕ್ಷಣಕ್ಕಾಗಿ ಸರ್ಕಾರ ನೀಡಲಾಗಿರುವ ಶೈಕ್ಷಣಿಕ ಸಹಾಯಧನ ಎಷ್ಟು; | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಮಂಡಳಿಗಳಲ್ಲಿ ಜಾರಿಯಲ್ಲಿರುವ ಯೋಜನೆಗಳಲ್ಲಿ, ಕಳೆದ 2 ವರ್ಷಗಳಿಂದ ಕಾರ್ಮಿಕರ ಮಕ್ಕಳ ಶಿಕ್ಷಣಕ್ಕಾಗಿ ನೀಡಲಾಗಿರುವ ಶೈಕ್ಷಣಿಕ ಸಹಾಯಧನದ ವಿವರವನ್ನು ಕೆಳಕಂಡಂತೆ ಒದಗಿಸಲಾಗಿದೆ.<br><br>**<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ</u>**<br><br>ಮಂಡಳಿಯ ಸುಂಕ ನಿಧಿಯಿಂದ ಶೈಕ್ಷಣಿಕ ಸಹಾಯಧನ ಸೌಲಭ್ಯದಡಿ ಕಳೆದ 2 ವರ್ಷದಲ್ಲಿ ಸಹಾಯಧನ ಬಿಡುಗಡೆ ಮಾಡಿರುವ ವಿವರ ಈ ಕೆಳಕಂಡಂತಿದೆ:-<br><br>ವರ್ಷ / ಶೈಕ್ಷಣಿಕ ಸಹಾಯಧನ ಸೌಲಭ್ಯ ಸಹಾಯಧನ ಪಡೆದ ಫಲಾನುಭವಿಗಳ ಸಂಖ್ಯೆ / ಸಹಾಯಧನ ವಿತರಿಸಿದ ಮೊತ್ತ (ರೂ.ಗಳಲ್ಲಿ)<br>2020-21 / 1,15,538 / 86,93,66,430/-<br>2021-22 / 3,74,193 / 542,70,85,000/-<br><br>**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u>**<br><br>ಈ ಮಂಡಳಿಯು ಜಾರಿಗೊಳಿಸುತ್ತಿರುವ **"ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ"**ಯಡಿ ಅಪಘಾತದಿಂದ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರಾದ ಚಾಲಕರು, ನಿರ್ವಾಹಕರು ಹಾಗೂ ಕ್ಲೀನರ್‌ಗಳ ಗರಿಷ್ಠ ಇಬ್ಬರು ಮಕ್ಕಳಿಗೆ 1ನೇ ತರಗತಿಯಿಂದ 12ನೇ ತರಗತಿಯವರೆಗೆ ವ್ಯಾಸಂಗಕ್ಕಾಗಿ ವಾರ್ಷಿಕ ತಲಾ ರೂ.10.000/-ಗಳ **"ಶೈಕ್ಷಣಿಕ ಧನಸಹಾಯ"** ನೀಡಲಾಗುತ್ತಿದ್ದು ಕಳೆದ 2 ವರ್ಷಗಳ ವಿವರ ಈ ಕೆಳಕಂಡತಿವೆ |

Nested table (from answer column):

| ವರ್ಷ | ಶೈಕ್ಷಣಿಕ ಸಹಾಯಧನ ಸೌಲಭ್ಯ ಸಹಾಯಧನ ಪಡೆದ ಫಲಾನುಭವಿಗಳ ಸಂಖ್ಯೆ | ಸಹಾಯಧನ ವಿತರಿಸಿದ ಮೊತ್ತ (ರೂ.ಗಳಲ್ಲಿ) |
|---|---|---|
| 2020-21 | 1,15,538 | 86,93,66,430/- |
| 2021-22 | 3,74,193 | 542,70,85,000/- |

| ವರ್ಷ | ವಿದ್ಯಾರ್ಥಿಗಳ ಸಂಖ್ಯೆ | ಶೈಕ್ಷಣಿಕ ಧನಸಹಾಯದ ಮೊತ್ತ |
|---|---|---|
| 2020-21 | 206 | ರೂ.20,60,000/- |
| 2021-22 | 255 | ರೂ.25,50,000/- |

**<u>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:</u>**

ಮಂಡಳಿಗೆ 20:40:20 ರ ಅನುಪಾತದಲ್ಲಿ ಒಬ್ಬ ಕಾರ್ಮಿಕನಿಗೆ ಪ್ರತಿ ಕಾರ್ಮಿಕರಿಂದ ರೂ 20/- ಮತ್ತು ಪ್ರತಿ ಕಾರ್ಮಿಕರಿಗೆ ಮಾಲೀಕರಿಂದ ರೂ 40/- ರಂತೆ ಹಾಗೂ ಸರ್ಕಾರದಿಂದ ಪ್ರತಿ ಕಾರ್ಮಿಕರಿಗೆ ರೂ. 20/- ರಂತೆ ಸಹಾಯಾನುದಾನವನ್ನು ವಂತಿಗೆಯಾಗಿ ನೀಡಲಾಗುತ್ತಿದೆ. ಈ ವಂತಿಗೆಯ ಮೊತ್ತವನ್ನು ಸಂಘಟಿತ ಕಾರ್ಮಿಕರಿಗೆ ಕಲ್ಯಾಣ ಯೋಜನೆಗಳಡಿ ವಿವಿಧ ಸೌಲಭ್ಯಗಳನ್ನು ನೀಡಲಾಗುತ್ತಿದೆ.

ಕಳೆದ 2 ವರ್ಷಗಳಲ್ಲಿ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯಕ್ಕಾಗಿ ಮಂಜೂರು ಮಾಡಲಾದ ವಿವರ ಈ ಕೆಳಕಂಡಂತಿದೆ.

| ವರ್ಷ | ಫಲಾನುಭವಿಗಳ ಸಂಖ್ಯೆ | ಮೊತ್ತ |
|---|---|---|
| 2020-21 | 13.729 | 6,01.48.000/- |
| 2021-22 | 10.745 | 4,51.76.000/- |

ಆ) ಪ್ರತಿ ವರ್ಷ ಶೈಕ್ಷಣಿಕ ಸಹಾಯಧನಕ್ಕಾಗಿ ಎಷ್ಟು ಅರ್ಜಿಗಳು ಸಲ್ಲಿಕೆಯಾಗುತ್ತಿವೆ ಹಾಗೂ ಸಲ್ಲಿಕೆಯಾಗುವ ಎಲ್ಲಾ ಅರ್ಜಿಗಳನ್ನು ಮಾನ್ಯತೆ ಮಾಡಲಾಗುವುದೇ ಮತ್ತು ಆಯ್ಕೆಗೆ ಇರುವ ಮಾನದಂಡಗಳೇನು;

ಶೈಕ್ಷಣಿಕ ಸಹಾಯಧನಕ್ಕಾಗಿ ಪ್ರತಿ ವರ್ಷ ಸಲ್ಲಿಕೆಯಾಗುತ್ತಿರುವ ಅರ್ಜಿಗಳು ಹಾಗೂ ಅರ್ಜಿಗಳನ್ನು ಮಾನ್ಯತೆ ಮಾಡಲು ಇರುವ ಮಾನದಂಡಗಳ ವಿವರವನ್ನು ಕೆಳಕಂಡಂತೆ ಒದಗಿಸಲಾಗಿದೆ.

**<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ</u>**

ಕಳೆದ ಮೂರು ವರ್ಷದಲ್ಲಿ ಶೈಕ್ಷಣಿಕ ಸಹಾಯಧನ ಕೋರಿ ಮಂಡಳಿಯಲ್ಲಿ ಸ್ವೀಕೃತವಾದ ಅರ್ಜಿಗಳ ವಿವರ:-

| ವರ್ಷ | ಶೈಕ್ಷಣಿಕ ಸಹಾಯಧನ ಸೌಲಭ್ಯಗಳಡಿ ಸ್ವೀಕರಿಸಲಾದ ಅರ್ಜಿಗಳು |
|---|---|
| 2019-2020 | 1,37,609 |
| 2020-2021 | 1,85,837 |
| 2021-2022 | 6,38,276 |

ಮಂಡಳಿಯ ನೋಂದಾಯಿತ ಫಲಾನುಭವಿಗಳು ಅವರ ಎರಡು ಮಕ್ಕಳ ವಿದ್ಯಾಭ್ಯಾಸ ಕೋರಿ ಅರ್ಜಿ ಸಲ್ಲಿಸಲು ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕರ್ನಾಟಕ ನಿಯಮಗಳು, 2006 ರ ನಿಯಮ-45 ರನ್ವಯ ಈ ಕೆಳಕಂಡ ನಿಗಧಿಪಡಿಸಿದ ದಾಖಲೆಗಳನ್ನು ಪೂರೈಸಿದ ಅರ್ಜಿಗಳನ್ನು ಮಂಜೂರು ಮಾಡಲಾಗುವುದು.

ನಿಯಮ 45: ಶೈಕ್ಷಣಿಕ ಸಹಾಯಧನ ಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್.

- ಆನ್ ಲೈನ್‌ನಲ್ಲಿಅರ್ಜಿ ಸಲ್ಲಿಸುವುದು.
- ಮಂಡಳಿಯಿಂದ ನೀಡಿರುವ ಗುರುತಿನ ಚೀಟಿಯ ಪ್ರತಿ
- ಫಲಾನುಭವಿ ಹೊಂದಿರುವ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ.
- ಫಲಾಭವಿಯ ಮಗ / ಮಗಳು ಉತ್ತೀರ್ಣ ಆಗಿರುವ ಕುರಿತು ಅಂಕ ಪಟ್ಟಿ ಹಾಗೂ ವ್ಯಾಸಂಗ ಮಾಡುತ್ತಿರುವ ಸಂಸ್ಥೆಯ ಮುಖ್ಯಸ್ಥರಿಂದ ವ್ಯಾಸಂಗ ಮೂಲ ಪ್ರಮಾಣ ಪತ್ರವನ್ನು ಸಲ್ಲಿಸಬೇಕು.
- ಶೈಕಣಿಕ ಸಹಾಯಧನ ಅರ್ಜಿಯನ್ನು ಶೈಕ್ಷಣಿಕ ವರ್ಷ ಪ್ರಾರಂಭವಾದ ದಿನದಿಂದ 6 ತಿಂಗಳ ಒಳಗೆ ಸಲ್ಲಿಸಬೇಕು.

ಫಲಾನುಭವಿ ಮತ್ತು ಮಗುವಿನ ಆಧಾರ್‌ಕಾರ್ಡ್ ಪ್ರತಿ.

**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:**

ಮಂಡಳಿಯು ಜಾರಿಗೊಳಿಸುತ್ತಿರುವ **"ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ"**ಯಡಿ ಶೈಕ್ಷಣಿಕ ಧನಸಹಾಯ ಸೌಲಭ್ಯವನ್ನು 2018-19ನೇ ಸಾಲಿನಿಂದ ಪ್ರಾರಂಭಿಸಲಾಗಿದ್ದು, ಸ್ವೀಕರಿಸಿದ ಅರ್ಜಿಗಳನ್ನು ನಿಗದಿಪಡಿಸಿದ ಮಾರ್ಗಸೂಚಿಗಳನ್ವಯ ಪರಿಶೀಲಿಸಿ, ಅರ್ಹರಾದಲ್ಲಿ ಮಾತ್ರ ಶೈಕ್ಷಣಿಕ ಧನಸಹಾಯವನ್ನು ಮಂಜೂರು ಮಾಡಲಾಗುತ್ತದೆ. 2018-19ನೇ ಸಾಲಿನಲ್ಲಿ ಕನಿಷ್ಠ 149 ಅರ್ಜಿಗಳು ಹಾಗೂ 2021-22ನೇ ಸಾಲಿನಲ್ಲಿ ಗರಿಷ್ಠ 255 ಅರ್ಜಿಗಳನ್ನು ಪುರಸ್ಕರಿಸಲಾಗಿದ್ದು, ಆಯ್ಕೆಗೆ ನಿಗಧಿಪಡಿಸಿರುವ ಮಾನದಂಡಗಳು ಹಾಗೂ ಅನುಸರಿಸುತ್ತಿರುವ ಕ್ರಮಗಳು ಈ ಕೆಳಗಿನಂತಿವೆ.

**ಮಾನದಂಡಗಳು:-**

- ಖಾಸಗಿ ವಾಣಿಜ್ಯ ಸಾರಿಗೆಚಾಲಕರು, ನಿರ್ವಾಹಕರು ಹಾಗೂ ಕ್ಲೀನರ್‌ಗಳು ಅಪಘಾತದಿಂದ ಶಾಶ್ವತ ದುರ್ಬಲತೆ ಅಥವಾ ಮರಣ ಹೊಂದಿದ ಪ್ರಕರಣಗಳಲ್ಲಿ ಮಂಡಳಿಯಿಂದ ಅಪಘಾತ ಪರಿಹಾರ ಸೌಲಭ್ಯ ಪಡೆದಿರಬೇಕು.
- ಗರಿಷ್ಠ ಇಬ್ಬರು ಮಕ್ಕಳಿಗೆ ಮಾತ್ರ.
- 1ನೇ ತರಗತಿಯಿಂದ ಪದವಿ ಪೂರ್ವ/12ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರಬೇಕು.

<table>
<tr><td></td><td></td><td><u>ಅನುಸರಿಸುತ್ತಿರುವ ಕ್ರಮಗಳು:</u><br>❖ ಶೈಕ್ಷಣಿಕ ಧನ ಸಹಾಯದ ನಿಗದಿತ ಅರ್ಜಿಗಳನ್ನು ಜಿಲ್ಲಾ ಕಾರ್ಮಿಕ ಅಧಿಕಾರಿಗಳ ಮುಖಾಂತರ ಅಥವಾ ನೇರವಾಗಿ ಮಂಡಳಿಗೆ ಸಲ್ಲಿಸಬಹುದು.<br>❖ ವ್ಯಾಸಂಗ ಮಾಡುತ್ತಿರುವ ಕುರಿತು ಶಾಲೆಯ ಮುಖ್ಯೋಪಾಧ್ಯಾಯರಿಂದ ಪ್ರಮಾಣ ಪತ್ರ ಸಲ್ಲಿಸಬೇಕು.<br><br>ಸದರಿ ಅರ್ಜಿಗಳನ್ನು ಸ್ಥಳೀಯ ಕಾರ್ಮಿಕ ಇಲಾಖೆಯ ಅಧಿಕಾರಿಗಳಿಂದ ಪರಿಶೀಲನೆ ನಡೆಸಿ ಸಲ್ಲಿಸಿರುವ ವರದಿಯ ಆಧಾರದ ಮೇಲೆ ಅರ್ಹರಿದ್ದಲ್ಲಿ, ಧನ ಸಹಾಯದ ಮೊತ್ತವನ್ನು ಅರ್ಜಿದಾರರ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗುವುದು.<br><br><u>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:</u><br>ಕಳೆದ ಎರಡು ವರ್ಷಗಳಲ್ಲಿ ಸಲ್ಲಿಕೆಯಾಗಿರುವ ಹಾಗೂ ಮಾನ್ಯತೆಯಾಗಿರುವ ಅರ್ಜಿಗಳ ವಿವರ ಈ ಕೆಳಕಂಡಂತಿದೆ.
<table>
<tr><th>ವರ್ಷ</th><th>ಮಾನ್ಯತೆಯಾಗಿರುವ ಶೈಕ್ಷಣಿಕ ಸಹಾಯಧನದ ಅರ್ಜಿಗಳು</th></tr>
<tr><td>2020-21</td><td>13,729</td></tr>
<tr><td>2021-22</td><td>13,188</td></tr>
</table>
ಅರ್ಜಿ ಸಲ್ಲಿಸಲು ಸಾಮಾನ್ಯ ವರ್ಗದ ವಿದ್ಯಾರ್ಥಿಗಳು ಶೇ.50 ಹಾಗೂ ಪ.ಜಾ / ಪ. ಪಂಗಡದ ವಿದ್ಯಾರ್ಥಿಗಳು ಶೇ. 45 ರಷ್ಟು ಅಂಕ ಪಡೆದು ತೇರ್ಗಡೆಯಾಗಿರಬೇಕು. ಒಂದು ಕುಟುಂಬದಲ್ಲಿ ಒಬ್ಬ ವಿದ್ಯಾರ್ಥಿಗೆ ಮಾತ್ರ ಈ ಸೌಲಭ್ಯ ನೀಡಲಾಗುವುದು</td></tr>
<tr><td>ಇ)</td><td>2021-22ನೇ ಸಾಲಿನಲ್ಲಿ ಸುಮಾರು 60 ಸಾವಿರ ಅರ್ಜಿ ಸಲ್ಲಿಕೆದಾರರಿಗೆ ಶೈಕ್ಷಣಿಕ ಸಹಾಯಧನ ಪಾವತಿಯಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td><u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ</u><br>ಮಂಡಳಿಯ ವತಿಯಿಂದ ಶೈಕ್ಷಣಿಕ ಧನ ಸಹಾಯಕ್ಕಾಗಿ ಇಲ್ಲಿಯವರೆಗೆ ಸೇವಸಿಂಧು ತಾಂತ್ರಂಶದ ಮೂಲಕ ಅರ್ಜಿಗಳನ್ನು ಸ್ವೀಕರಿಸಿ ವಿಲೇವಾರಿ ಮಾಡಲಾಗುತ್ತಿದ್ದು, 2021-22ನೇ ಸಾಲಿನಿಂದ E-Governance ಇಲಾಖೆಯ ಎಸ್‌ಎಸ್‌ಪಿ ಪೋರ್ಟಲ್ ಮೂಲಕ ಶೈಕ್ಷಣಿಕ ಧನಸಹಾಯಕ್ಕಾಗಿ ಅರ್ಜಿ ಸಲ್ಲಿಸಲು ಫಲಾನುಭವಿಗಳಿಗೆ ಅವಕಾಶ ಕಲ್ಪಿಸಲಾಗಿರುತ್ತದೆ. ಈ ಪೋರ್ಟಲ್‌ನಲ್ಲಿ ಸ್ವೀಕೃತವಾಗಿರುವ 42,173 ಅರ್ಜಿಗಳು ವಿಲೇವಾರಿಗಾಗಿ ಬಾಕಿ ಇರುತ್ತವೆ. ಶೀಘ್ರವಾಗಿ ಡಿಬಿಟಿ ಮೂಲಕ ಸಹಾಯಧನ ಸಂದಾಯ ಮಾಡಲು ಕ್ರಮ ಕೈಗೊಳ್ಳಲಾಗುವುದು.</td></tr>
<tr><td>ಈ)</td><td>2022-23ನೇ ಸಾಲಿನ ಶೈಕ್ಷಣಿಕ ವರ್ಷ ಪ್ರಾರಂಭವಾಗಿ ಆರು ತಿಂಗಳು ಕಳೆದರೂ ಇದುವರೆಗೂ ಶೈಕ್ಷಣಿಕ ಸಹಾಯಧನಕ್ಕಾಗಿ ಅರ್ಜಿಯನ್ನು ಆಹ್ವಾನಿಸದಿರುವುದು ಕಾರಣವೇನು? ಇದು ಸರ್ಕಾರದ ಗಮನಕ್ಕೆ ಬಂದಿದೆಯೇ? (ವಿವರ ನೀಡುವುದು)</td><td><u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ</u><br><br>2021-22ನೇ ಸಾಲಿನಿಂದ E-Governance ಇಲಾಖೆಯ ಎಸ್‌ಎಸ್‌ಪಿ ಪೋರ್ಟಲ್ ಮೂಲಕ ಶೈಕ್ಷಣಿಕ ಧನಸಹಾಯಕ್ಕಾಗಿ ಅರ್ಜಿ ಸಲ್ಲಿಸಲು ಫಲಾನುಭವಿಗಳಿಗೆ ಅವಕಾಶ ಕಲ್ಪಿಸಲಾಗಿರುತ್ತದೆ.</td></tr>
</table>

| | | |
|---|---|---|
| | | ತಂತ್ರಾಂಶದಲ್ಲಿ ಸ್ವೀಕೃತವಾಗುವ ಅರ್ಜಿಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವ ನಿಟ್ಟಿನಲ್ಲಿ ಅರ್ಜಿಗಳ ಹೆಚ್ಚಿನ ಪರಿಶೀಲನೆಗಾಗಿ ತಂತ್ರಾಂಶದಲ್ಲಿ ಹಿರಿಯ ಕಾರ್ಮಿಕ / ಕಾರ್ಮಿಕ ನಿರೀಕ್ಷಕರು ಹಾಗೂ ಕಾರ್ಮಿಕ ಅಧಿಕಾರಿಗಳಿಗೆ ಅವಕಾಶ ಕಲ್ಪಿಸಲಾಗುತ್ತಿದ್ದು, ಈ ಕುರಿತು ಕ್ರಮವಹಿಸಿದ ನಂತರ 2022-23ನೇ ಸಾಲಿನ ಶೈಕ್ಷಣಿಕ ವರ್ಷದ ಅರ್ಜಿಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗುವುದು.<br><br>**ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:**<br><br>2022-23 ನೇ ಸಾಲಿನಲ್ಲಿ ಮಂಡಳಿಯಿಂದ ಶೈಕ್ಷಣಿಕ ಪ್ರೋತ್ಸಾಹ ಸಹಾಯ ಧನದ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ದಿನಾಂಕ: 31-12-2022 ಕ್ಕೆ ನಿಗದಿಗೊಳಿಸಿದೆ. |

ಕಾಇ 749 ಎಲ್‌ಇಟಿ 2022

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ ಸಚಿವರು